## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಮ್ಎಫ್‌ಸಿ ಹುನಗುಂದ ಇವರ ನ್ಯಾಯಾಲಯದಲ್ಲಿ

ಕ್ರಿಮಿನಲ್ ಮೊಕದ್ದಮೆ ನಂಃ 1297/2018

ಸಿ.ಡಬ್ಲ್ಯೂ- 5 ಪಿ.ಡಬ್ಲ್ಯೂ-4

| | | |
|---|---|---|
| ಸಾಕ್ಷಿಯ ಹೆಸರು | ಃ | ಗಿರಿಶ ರಾಠೋಡ |
| ತಂದೆ ಹೆಸರು | ಃ | ಬಾಬು |
| ವಯಸ್ಸು | ಃ | 40 ವರ್ಷ |
| ಉದ್ಯೋಗ | ಃ | ಕುರಿ ವ್ಯಾಪಾರ |
| ವಾಸಸ್ಥಳ | ಃ | ಅಮೀನಗಡ |

ದಿನಾಂಕಃ 13-02-2023 ರಂದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಸಅ ರವರಿಂದಃ

ನಾನು ಯಾವುದೇ ಪಂಚನಾಮೆಯಲ್ಲಿ ಬಾಗಿಯಾಗಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ಜಪ್ತಪಡಿಸಿಕೊಂಡಿಲ್ಲ. ನಾನು ಒಂದು ಪಂಚನಾಮೆಯನ್ನು ನೋಡುತ್ತಿದ್ದು ಅದರಲ್ಲಿರುವ ಸಹಿ ನನ್ನದೇ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ. ಅದರ ಮೇಲಿರುವ ಸಹಿಯನ್ನು ನಿ.ಪಿ.4(ಬಿ) ಎಂದು ಗುರುತಿಸಲಾಯಿತು. ಅದರಲ್ಲಿರುವ ವಿಷಯಗಳ ಬಗ್ಗೆ ನನಗೆ ಮಾಹಿತಿ ಇಲ್ಲ.

ಪೋಲಿಸರು ನನ್ನ ಸಮಕ್ಷಮ ಯಾವುದೇ ಮುದ್ದೆಮಾಲನ್ನು ಜಪ್ತಪಡಿಸಿಕೊಂಡಿಲ್ಲ. ನಾನು ಒಂದು ಜಪ್ತ ಪಂಚನಾಮೆಯನ್ನು ನೋಡುತ್ತಿದ್ದು ಅದರಲ್ಲಿರುವ ಸಹಿ ನನ್ನದೇ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದೆ. ಅದರ ಮೇಲಿರುವ ಸಹಿಯನ್ನು ನಿ.ಪಿ.5(ಬಿ) ಎಂದು ಗುರುತಿಸಲಾಯಿತು. ಅದರಲ್ಲಿರುವ ವಿಷಯಗಳ ಬಗ್ಗೆ ನನಗೆ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿಯನ್ನು ಕೋರಿರುತ್ತಾರೆ. ನ್ಯಾಯಾಲಯದ ಮುಂದೆ ಇರುವ ದಾಖಲೆಗಳನ್ನು ಪರಿಶೀಲಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ** ಸಸಅ ರವರಿಂದಃ

ದಿ:25-02-2017 ರಂದು 13.45 ರಿಂದ 14.45 ರವರೆಗೆ ಪೋಲಿಸರು ಉಪನಾಳ ಎಸ್.ಸಿ. ಗ್ರಾಮದ ಹಳ್ಳದಲ್ಲಿ ಅಕ್ರಮ ಮರಳುಗಾರಿಕೆ ಕುರಿತು ದಾಳಿ ನಡೆಸಿ ಮಾದರಿ ಪಡೆದು ನನ್ನ ಹಾಗೂ ಚಾಸಾ-4 ರವರ ಸಮಕ್ಷಮ ಪಂಚನಾಮೆ ಮಾಡಿ ನಿಪಿ-4 ರಂತೆ ಪಂಚನಾಮೆ ಬರೆದಿದ್ದಾರೆ ಎಂದರೆ ಸರಿಯಲ್ಲ.

ದಿ:25-02-2017 ರಂದು ಅಮೀನಗಡ ಠಾಣೆಯಲ್ಲಿ ಪೋಲಿಸರು ನನ್ನ ಹಾಗೂ ಚಾಸಾ-4 ರವರ ಎದುರು 17.00 ರಿಂದ 18.00 ವರೆಗೆ ಪಂಚನಾಮೆ ಮಾಡಿ ಒಂದು ಪೋಲಿಸ ಸಮವಸ್ತ್ರವನ್ನು ಜಪ್ತ ಪಡಿಸಿಕೊಂಡಿದ್ದಾರೆ

ಎಂದರೆ ಸರಿಯಲ್ಲ.

ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನ್ಯಾಯಾಲಯದ ಎದುರು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇರುವುದಿಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು.)

ಓ ಹೇ ಕೆ ಸರಿ ಇದೆ.

ಅಪರ ದಿವಾಣಿ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ ಹುನಗುಂದ.